# ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ

ಜ್ಞಾನ ಸಾಗರ ಆವರಣ, ವಿನಾಯಕ ನಗರ, ಕಂಟೋನ್ಮೆಂಟ್, ಬಳ್ಳಾರಿ – 583105

**ಪ್ರೊ. ಸಿ.ಬಿ. ಹೊನ್ನುಸಿದ್ಧಾರ್ಥ**
**ಕುಲಸಚಿವರು (ಮೌಲ್ಯಮಾಪನ)**

**ದೂರವಾಣಿ: 08392-241011**

ಸಂಖ್ಯೆ: ವಿಶ್ರೀಕೃವಿಬ/ಪರೀಕ್ಷಾ/ಸ್ನಾತಕ/ಮೌಲ್ಯಮಾಪನ/2018–19/ 3513 ದಿನಾಂಕ: 02.01.2019

## ಸುತ್ತೋಲೆ

**ವಿಷಯ :** ನವೆಂಬರ್/ಡಿಸೆಂಬರ್–2018ರ ತಿಂಗಳಿನಲ್ಲಿ ಜರುಗಿದ ಸ್ನಾತಕ ಪದವಿ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನದ ಪ್ರಯುಕ್ತ ತಮ್ಮ ತಮ್ಮ ಮಹಾವಿದ್ಯಾಲಯದ ಅಧ್ಯಾಪಕರುಗಳು ಮೌಲ್ಯಮಾಪನ ಕಾರ್ಯ ಮುಂದುವರೆಸುವ ಕುರಿತು.

*****

ಈ ಮೂಲಕ ವಿಶ್ವವಿದ್ಯಾಲಯದ ಅಡಿಯಲ್ಲಿ ಬರುವ ಎಲ್ಲಾ ಸಂಯೋಜಿತ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳ ಗಮನಕ್ಕೆ ತರಬಯಸುವುದೇನೆಂದರೆ, ನವೆಂಬರ್/ಡಿಸೆಂಬರ್–2018ರ ತಿಂಗಳಿನಲ್ಲಿ ಜರುಗಿದ ಸ್ನಾತಕ ಪದವಿ ಪರೀಕ್ಷೆಗಳ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಲು ತಮ್ಮ ಮಹಾವಿದ್ಯಾಲಯದಲ್ಲಿರುವ ಅಧ್ಯಾಪಕರುಗಳಿಗೆ ಈಗಾಗಲೇ ಮೌಲ್ಯಮಾಪನದ ಆದೇಶವನ್ನು ನೀಡಲಾಗಿದೆ. ಆದರೆ, ಕೆಲ ಅಧ್ಯಾಪಕರುಗಳು ಮೌಲ್ಯಮಾಪನ ಮಾಡಲು ಹಾಜರಾಗದೇ ಇರುವುದರಿಂದ ಮೌಲ್ಯಮಾಪನ ಕಾರ್ಯ ಪೂರ್ಣಗೊಂಡಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಈಗಾಗಲೇ ಶೈಕ್ಷಣಿಕ ಸಾಲಿನ ದ್ವಿತೀಯ/ಚತುರ್ಥ/ಆರನೇ ಸೆಮಿಸ್ಟರ್‌ಗಳ ಶೈಕ್ಷಣಿಕ ವರ್ಷ ಆರಂಭವಾಗಿದ್ದರೂ, ಈಗಾಗಲೇ ಮೌಲ್ಯಮಾಪನ ಕಾರ್ಯದಲ್ಲಿ ನಿರತರಾದ ತಮ್ಮ ತಮ್ಮ ಮಹಾವಿದ್ಯಾಲಯಗಳ ಅಧ್ಯಾಪಕರುಗಳನ್ನು ಮೌಲ್ಯಮಾಪನ ಮುಂದುವರೆಸಲು ಅನುಮತಿಸಿ ಸಹಕರಿಸಲು ಈ ಮೂಲಕ ಸೂಚಿಸಲಾಗಿದೆ. ಸದರಿ ಮೌಲ್ಯಮಾಪನ ಕಾರ್ಯಕ್ಕೆ ಹಾಜರಾದ ಅಧ್ಯಾಪಕರುಗಳ ಹಾಜರಾತಿಯನ್ನು (ಅತಿಥಿ ಉಪನ್ಯಾಸಕರುಗಳೂ ಸೇರಿ) ಕಛೇರಿ ಕೆಲಸದ ಪ್ರಯುಕ್ತ ಎಂದು ಪರಿಗಣಿಸಲಾಗುವುದು.

ಕೆ.ಎಸ್.ಯು. ಆಕ್ಟ್ 2000 ಮತ್ತು ವಿಶ್ವವಿದ್ಯಾಲಯದ ಪರೀಕ್ಷಾ ಕೈಪಿಡಿಯನ್ವಯ ಪರೀಕ್ಷಾ ಕಾರ್ಯವು ಕಡ್ಡಾಯವಾಗಿರುತ್ತದೆ. ಮುಂದುವರೆದು, ಒಂದು ವೇಳೆ ಈಗಾಗಲೇ ನಿಯೋಜಿಸಿದ ತಮ್ಮ ತಮ್ಮ ಮಹಾವಿದ್ಯಾಲಯಗಳ ಪ್ರಾಂಶುಪಾಲರು ಅನುಮತಿಸದೇ ಅಧ್ಯಾಪಕರುಗಳು ಮೌಲ್ಯಮಾಪನ ಕಾರ್ಯಕ್ಕೆ ಗೈರು ಹಾಜರಾದರೆ ಹಾಗೂ ವಿದ್ಯಾರ್ಥಿಗಳಿಗೆ ಫಲಿತಾಂಶ ಪ್ರಕಟಿಸಲು ವಿಳಂಬವಾದರೆ ಅದಕ್ಕೆ ಸಂಬಂಧಪಟ್ಟ ಮಹಾವಿದ್ಯಾಲಯದ ಪ್ರಾಂಶುಪಾಲರೇ ಹೊಣೆಗಾರರಾಗುತ್ತಾರೆ. ಅಲ್ಲದೇ, ತಮ್ಮ ಮಹಾವಿದ್ಯಾಲಯದ ವಿದ್ಯಾರ್ಥಿಗಳ ಫಲಿತಾಂಶವನ್ನು ತಡೆಹಿಡಿದು ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಕುಲಸಚಿವರು (ಮೌಲ್ಯಮಾಪನ) 2/1/19
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ
ಬಳ್ಳಾರಿ.

**ಗೆ,**

ಎಲ್ಲಾ ಸಂಯೋಜಿತ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ,

**ಪ್ರತಿಗಳು:**

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ವಿ.ಶ್ರೀ.ಕೃ. ವಿಶ್ವವಿದ್ಯಾಲಯ, ಬಳ್ಳಾರಿ ರವರ ಮಾಹಿತಿಗಾಗಿ.
2. ಕುಲಸಚಿವರು, ವಿ.ಶ್ರೀ.ಕೃ. ವಿಶ್ವವಿದ್ಯಾಲಯ, ಬಳ್ಳಾರಿ ರವರ ಮಾಹಿತಿಗಾಗಿ.
3. **ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಮಿನಿ ವಿಧಾನಸೌಧ ಹಿಂಭಾಗ, ಕಲಬುರಗಿ–585101 ಇವರಿಗೆ ಸೂಕ್ತ ಕ್ರಮಕ್ಕಾಗಿ.**
4. **ಕಸ್ಟೋಡಿಯನ್, ಸ್ನಾತಕ ಮೌಲ್ಯಮಾಪನ ಕೇಂದ್ರ, ಎಸ್.ಜಿ.ಆರ್.ಸಿ.ಎಂ. ಸರ್ಕಾರಿ ವಾಣಿಜ್ಯ ಮತ್ತು ನಿರ್ವಹಣಾ ಮಹಾವಿದ್ಯಾಲಯ, ಬಳ್ಳಾರಿ– ನವೆಂಬರ್/ಡಿಸೆಂಬರ್–2018ರ ಸ್ನಾತಕ ಪದವಿ ಉತ್ತರ ಪತ್ರಿಕೆಗಳ ಮೌಲ್ಯಮಾಪನಕ್ಕೆ ಸಂಬಂಧಿಸಿದಂತೆ ಮೌಲ್ಯಮಾಪನ ಪ್ರಕ್ರಿಯೆ ಮುಕ್ತಾಯದವರೆಗೆ ಮೌಲ್ಯಮಾಪಕರುಗಳನ್ನು ಬಿಡುಗಡೆ ಮಾಡದಿರಲು ಆದೇಶಿಸಿದೆ.**
5. ಪ್ರಾಚಾರ್ಯರು, ಎಸ್.ಜಿ.ಆರ್.ಸಿ.ಎಂ. ಸರ್ಕಾರಿ ವಾಣಿಜ್ಯ ಮತ್ತು ನಿರ್ವಹಣಾ ಮಹಾವಿದ್ಯಾಲಯ, ಬಳ್ಳಾರಿ.
6. ಕಛೇರಿ ಪ್ರತಿ.